# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ : ಎ8/ಎಸ್.ಎಸ್.ಎಲ್.ಸಿ/ಪ.ಇತರೆ(ಎಸ್.ಒ.ಪಿ)/02/2020-21 ದಿನಾಂಕ:02-06-2020

:::ಪರಿಷ್ಕೃತ ಸುತ್ತೋಲೆ:::

ವಿಷಯ:- ಕೋವಿಡ್-19ರ ಹಿನ್ನೆಲೆಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಸಲು ಪ್ರಮಾಣಿತ ಕಾರ್ಯಾಚರಣಾ ವಿಧಾನ (ಎಸ್.ಓ.ಪಿ) (Standard Operating Procedure)

ಉಲ್ಲೇಖ:- 1.ಮಾನ್ಯ ಉಚ್ಚ ನ್ಯಾಯಾಲಯದ ಆದೇಶ ಸಂಖ್ಯೆ: ರಿಟ್ ಪಿಟಿಷನ್ ನಂ:7201 ಒಎಫ್ 2020(ಇಡಿಎನ್-ಆರ್.ಇ.ಎಸ್) ಪಿ.ಐ.ಎಲ್. ದಿನಾಂಕ:27-05-2020.

2.ಕೋವಿಡ್-19 ರ ಹಿನ್ನೆಲೆಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಸಲು ಪ್ರಮಾಣಿತ ಕಾರ್ಯಾಚರಣಾ ವಿಧಾನ (ಎಸ್.ಓ.ಪಿ) (Standard Operating Procedure) ಕಡತ ಸಂಖ್ಯೆ:ಆಡಳಿತ/ಎಸ್.ಒ.ಪಿ/01/2020-21 ದಿನಾಂಕ:27-05-2020.

*********

2019-20ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು ಮಾರ್ಚ್ 27 ರಿಂದ ಏಪ್ರಿಲ್ 09ರವರೆಗೆ ನಡೆಸಲು ಉದ್ದೇಶಿಸಲಾಗಿತ್ತು, ಆದರೆ ಕೋವಿಡ್-19ರ ಹಿನ್ನೆಲೆಯಲ್ಲಿ ದೇಶಾದ್ಯಂತ ಲಾಕ್‌ಡೌನ್ ಜಾರಿಯಿದ್ದ ಕಾರಣ ಪರೀಕ್ಷೆಗಳನ್ನು ಮುಂದೂಡಲಾಗಿತ್ತು. ಮುಂದೂಡಲಾಗಿದ್ದ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಜೂನ್ 25, 2020 ರಿಂದ ನಡೆಸಲು ಉದ್ದೇಶಿಸಲಾಗಿದೆ. ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಈ ಸಂದರ್ಭದಲ್ಲಿ ನಡೆಸುವ ಎದುರಾಗಿ, ಸಾರ್ವಜನಿಕ ಹಿತಾಸಕ್ತಿ ಅರ್ಜಿ ಮಾನ್ಯ ಉಚ್ಚ ನ್ಯಾಯಾಲಯದ ಮುಂದೆ ದಾಖಲಾಗಿತ್ತು. ಇಲಾಖೆಯಿಂದ ಉದ್ದೇಶಿತ ಎಸ್.ಎಸ್.ಎಲ್.ಸಿ ಪರೀಕ್ಷಾ ಸಂದರ್ಭದಲ್ಲಿ ತೆಗೆದುಕೊಳ್ಳಲಾಗುವ ಸುರಕ್ಷತಾ ಕ್ರಮಗಳ ಬಗ್ಗೆ ಉಲ್ಲೇಖ(2)ರಂತೆ ಎಸ್.ಒ.ಪಿ. ತಯಾರಿಸಿ ಮಾನ್ಯ ಉಚ್ಚ ನ್ಯಾಯಾಲಯದ ಮುಂದೆ ಮಂಡಿಸಲಾಗಿತ್ತು. ಮಾನ್ಯ ಉಚ್ಚ ನ್ಯಾಯಾಲಯವು ಪ್ರಕರಣವನ್ನು ಆಲಿಸಿ, ಅಂತಿಮ ತೀರ್ಮಾನವನ್ನು ಉಲ್ಲೇಖ(1)ರಂತೆ ನೀಡಿರುತ್ತದೆ. ಸದರಿ ಆದೇಶದಲ್ಲಿ ಪರೀಕ್ಷೆಗಳನ್ನು ನಡೆಸಲು ಅನುಮತಿಸುತ್ತಾ, ಎಸ್.ಒ.ಪಿ ಯನ್ನು ಕಟ್ಟುನಿಟ್ಟಾಗಿ ಪಾಲಿಸುವ ಷರತ್ತಿಗೊಳಪಟ್ಟು, ಕೆಲವು ಹೆಚ್ಚುವರಿ ಷರತ್ತುಗಳನ್ನು ಸಹ ವಿಧಿಸಿರುತ್ತದೆ. ನಂತರ ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಗೃಹ ಇಲಾಖೆ, ಆರೋಗ್ಯ ಇಲಾಖೆ, ಹಾಗೂ ಸಾರಿಗೆ ಇಲಾಖೆಯೊಂದಿಗೆ ಸಭೆಯನ್ನು ನಡೆಸಲಾಗಿರುತ್ತದೆ. ಸಭೆಯಲ್ಲಿ ಬಂದಂತಹ ಸಲಹೆಗಳನ್ನು ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಉಲ್ಲೇಖ(2)ರಲ್ಲಿ ಹೊರಡಿಸಿದ್ದ ಎಸ್.ಒ.ಪಿ ಯನ್ನು ಇಲಾಖೆಯ ಎಲ್ಲಾ ಹಂತದ ಅಧಿಕಾರಿಗಳು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಈ ಕೆಳಗಿನಂತೆ ಪರಿಷ್ಕರಿಸಿ ಆದೇಶಿಸಿದೆ.

## I. ಪರೀಕ್ಷಾ ಕೇಂದ್ರ :

1. ಯಾವುದೇ ಪರೀಕ್ಷಾ ಕೇಂದ್ರವು ಘೋಷಿತ ಕಂಟೈನ್‌ಮೆಂಟ್ ವಲಯದಲ್ಲಿರಬಾರದು.
2. ಯಾವುದೇ ಪರೀಕ್ಷಾ ಕೇಂದ್ರವನ್ನು ಕ್ವಾರಂಟೈನ್ ಕೇಂದ್ರವನ್ನಾಗಿ ಬಳಸಲು ಅವಕಾಶ ನೀಡಬಾರದು.
3. ಪ್ರತಿ ಪರೀಕ್ಷಾ ಕೇಂದ್ರವನ್ನು ಪರೀಕ್ಷೆಗೆ ಮೂರು ದಿನಗಳ ಮೊದಲು ಸೋಂಕು ನಿವಾರಕ ದ್ರಾವಣವನ್ನು ಸಂಬಂಧಪಟ್ಟ ನಗರ/ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಮೂಲಕ ಸಿಂಪಡಿಸಿ ಸ್ವಚ್ಛಗೊಳಿಸುವುದು.
4. ಪ್ರತಿ ಪರೀಕ್ಷೆಯ ನಂತರ ಪರೀಕ್ಷಾ ಕೇಂದ್ರದ ಎಲ್ಲಾ ಕೊಠಡಿಗಳು/ಪೀಠೋಪಕರಣಗಳನ್ನು ಸ್ಯಾನಿಟೈಸ್ ಮಾಡುವುದು.
5. ಪ್ರತಿ ಪರೀಕ್ಷಾ ಕೇಂದ್ರದಲ್ಲೂ, ಪರೀಕ್ಷಾ ಕೇಂದ್ರದ ಒಳಗೆ ಪ್ರವೇಶಿಸುವ ಪ್ರದೇಶದಲ್ಲಿ ಹಾಗೂ ಪರೀಕ್ಷಾ ಕೊಠಡಿಗಳಲ್ಲಿ ದೈಹಿಕ ಅಂತರವನ್ನು ಕಾಯ್ದುಕೊಳ್ಳಲು ಸೂಕ್ತ ವ್ಯವಸ್ಥೆ ಕಲ್ಪಿಸುವುದು.
6. ಕಂಡಿಕೆ [illegible] ರನ್ವಯ ದೈಹಿಕ ಕನಿಷ್ಠ ಒಂದು ಮೀಟರ್ ಅಂತರ ಕಾಪಾಡಿಕೊಳ್ಳಬೇಕು. ಪ್ರತಿ ಕೊಠಡಿಯಲ್ಲಿ ಗರಿಷ್ಠ 18 ರಿಂದ 20 ಮಕ್ಕಳಿರಬೇಕು. ಒಂದು ಬೆಂಚಿಗೆ ಇಬ್ಬರು ಮಕ್ಕಳು ಮಾತ್ರ.
7. ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳ ಆಸನ ವ್ಯವಸ್ಥೆಯ ಬಗ್ಗೆ ಅಂದರೆ ಯಾವ ವಿದ್ಯಾರ್ಥಿ ಯಾವ ಕೊಠಡಿಯಲ್ಲಿ ಬರೆಯುತ್ತಾನೆ ಎಂಬುದನ್ನು ಮುಂಚಿತವಾಗಿ ವಿದ್ಯಾರ್ಥಿಗಳಿಗೆ ತಿಳಿಸುವ ವ್ಯವಸ್ಥೆ ಮಾಡುವುದು. ಈ ರೀತಿ ಮಾಡುವುದರಿಂದ ವಿದ್ಯಾರ್ಥಿಗಳು ಸೂಚನಾ ಫಲಕದ ಮುಂದೆ ಗುಂಪುಗೂಡುವುದನ್ನು ತಡೆಗಟ್ಟಬಹುದು.
8. ಪ್ರತಿ ವಿದ್ಯಾರ್ಥಿಯು ತಮ್ಮದೇ ಆದ ನೀರಿನ ಬಾಟಲಿಗಳನ್ನು ತರಲು ಅವಕಾಶ ನೀಡುವುದು. ಪರೀಕ್ಷಾ ಕೇಂದ್ರಕ್ಕೆ ವಿದ್ಯಾರ್ಥಿಗಳು ಬೆಳಿಗ್ಗೆ ಸಾಕಷ್ಟು ಮುಂಚಿತವಾಗಿ ಬರುವುದರಿಂದ ಅಪೇಕ್ಷೆ ಪಟ್ಟಲ್ಲಿ ತಮ್ಮ ಮನೆಯಿಂದ ಆಹಾರದ ಡಬ್ಬಿಯನ್ನು ಒಯ್ಯಲು ಅನುವು ಮಾಡಿಕೊಡುವುದು.
9. ಮಲೆನಾಡು ಪ್ರದೇಶದ ಜಿಲ್ಲೆಗಳಲ್ಲಿನ ಪರೀಕ್ಷಾ ಕೇಂದ್ರಗಳಲ್ಲಿ ಕೊಠಡಿಯೊಳಗೆ ಮಳೆಯ ನೀರು ಎರಚುವಿಕೆಯಿಂದ ತೊಂದರೆ ಉಂಟಾಗುತ್ತಿದೆ ಎಂದು ಭಾವಿಸಿದ್ದಲ್ಲಿ ಮಕ್ಕಳ ಸಂಖ್ಯೆಯನ್ನು ಬೆಂಚಿಗೊಂದರಂತೆ ನಿರ್ದಿಷ್ಟ ಪಡಿಸಿಕೊಂಡು ಪರೀಕ್ಷಾ ಕೇಂದ್ರಗಳ ಕೊಠಡಿ ಲಭ್ಯತೆಗನುಸಾರವಾಗಿ ಕೊಠಡಿಗಳ ಸಂಖ್ಯೆನ್ನು ಹೆಚ್ಚಿಸಿಕೊಳ್ಳುವುದು. ಇದಕ್ಕೆ ಅನುಗುಣವಾಗಿ ಕೊಠಡಿ ಮೇಲ್ವಿಚಾರಕರನ್ನು ನಿಯೋಜಿಸಿಕೊಳ್ಳುವುದು.
10. ಕೆಮ್ಮು /ನೆಗಡಿ /ಜ್ವರ ಮೊದಲಾದವುಗಳಿಂದ ಬಳಲುತ್ತಿರುವ ಅಥವಾ ಕಂಟೈನ್‌ಮೆಂಟ್ ವಲಯದಿಂದ ಬಂದಿರುವ ವಿದ್ಯಾರ್ಥಿಗಳಿಗೆ ಪರೀಕ್ಷೆ ನಡೆಸಲು ಕನಿಷ್ಠ ಎರಡು ಕೊಠಡಿಗಳನ್ನು **"ವಿಶೇಷ ಕೊಠಡಿ"**ಗಳೆಂದು ಹೆಸರಿಸಿ ಕಾಯ್ದಿರಿಸುವುದು.
11. ಪ್ರತಿ ತಾಲ್ಲೂಕಿನ ಕೇಂದ್ರ ಸ್ಥಾನ ಮತ್ತು ಜಿಲ್ಲಾ ಕೇಂದ್ರ ಸ್ಥಾನಗಳಲ್ಲಿ ಕನಿಷ್ಠ ಎರಡು ಹೆಚ್ಚುವರಿ ಪರೀಕ್ಷಾ ಕೇಂದ್ರಗಳನ್ನು ಗುರುತಿಸಿ, ಅವುಗಳನ್ನು **"ಕಾಯ್ದಿರಿಸಿದ ಪರೀಕ್ಷಾ ಕೇಂದ್ರ"**ಗಳಾಗಿ ಇಡುವುದು.
12. ಕೋವಿಡ್-19 ಪಾಸಿಟೀವ್ ಪ್ರಕರಣಗಳು ವರದಿಯಾಗಿ, ಯಾವುದೇ ಪರೀಕ್ಷಾ ಕೇಂದ್ರ ಕಂಟೈನ್‌ಮೆಂಟ್ ವಲಯದೊಳಗೆ ಬಂದರೆ, ಆಗ ಆ ಪರೀಕ್ಷಾ ಕೇಂದ್ರವನ್ನು ಈಗಾಗಲೇ ಗುರುತಿಸಿರುವ, **"ಕಾಯ್ದಿರಿಸಿದ ಪರೀಕ್ಷಾ ಕೇಂದ್ರ"**ಕ್ಕೆ ಸ್ಥಳಾಂತರಿಸುವುದು. ಅಂದರೆ, ಯಾವುದೇ ಪರೀಕ್ಷಾ ಕೇಂದ್ರವು ಕಂಟೈನ್‌ಮೆಂಟ್ ವಲಯದಲ್ಲಿ ಯಾವತ್ತೂ ಇರದಂತೆ ನೋಡಿಕೊಳ್ಳುವುದು.
13. ಆದರೆ ದಿನಾಂಕ:22-06-2020ರ ನಂತರ ಅಥವಾ ಪರೀಕ್ಷೆ ಪ್ರಾರಂಭವಾದ ನಂತರ ಯಾವುದೇ ಪರೀಕ್ಷಾ ಕೇಂದ್ರ ಕಂಟೈನ್‌ಮೆಂಟ್ ವಲಯದೊಳಗೆ ಬಂದರೆ, ಸಂಬಂಧಪಟ್ಟ ಉಪನಿರ್ದೇಶಕರು ಜಿಲ್ಲೆಯ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ಪರೀಕ್ಷಾ ಕೇಂದ್ರವನ್ನು ಕಂಟೈನ್‌ಮೆಂಟ್ ವಲಯದಿಂದ ಹೊರಗಿರುವ ಹತ್ತಿರದ ಕಾಯ್ದಿರಿಸಿದ ಪರೀಕ್ಷಾ ಕೇಂದ್ರಕ್ಕೆ ಸ್ಥಳಾಂತರಿಸಿ ಮೂಲ ಪರೀಕ್ಷಾ ಕೇಂದ್ರದಲ್ಲಿದ್ದ ಎಲ್ಲಾ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿ, ಯಾವುದೇ ಅನಾನುಕೂಲವಾಗದಂತೆ ಸೂಕ್ತ ವ್ಯವಸ್ಥೆ ಮಾಡಲು

ವಾಸ್ತವಿಕವಾಗಿ ಸಾಧ್ಯತೆಗಳಿದ್ದಲ್ಲಿ ಜಿಲ್ಲಾಧಿಕಾರಿಗಳ ಅನುಮೋದನೆಯೊಂದಿಗೆ ಪರೀಕ್ಷಾ ಕೇಂದ್ರವನ್ನು ಸ್ಥಳಾಂತರಿಸುವುದು ಹಾಗೂ ಮಂಡಳಿಗೆ ಈ ಬಗ್ಗೆ ತುರ್ತಾಗಿ ಮಾಹಿತಿ ನೀಡುವುದು. ಇಲ್ಲವಾದಲ್ಲಿ ಅಂತಹ ಪರೀಕ್ಷಾ ಕೇಂದ್ರದಲ್ಲಿ ಬರೆಯುವ ವಿದ್ಯಾರ್ಥಿಗಳಿಗೆ ಬಾಕಿ ಪರೀಕ್ಷೆಗಳನ್ನು ಮುಂದೂಡಿ ಪೂರಕ ಪರೀಕ್ಷೆ ಸಮಯದಲ್ಲಿ **"ಪ್ರಥಮ ಅವಕಾಶ"**ವೆಂದೇ ಪರಿಗಣಿಸಿ ಪರೀಕ್ಷೆ ಬರೆಯಲು ಅವಕಾಶ ನೀಡಲಾಗುವುದು.

14. ಪರೀಕ್ಷೆಯ ನಂತರ ವಿದ್ಯಾರ್ಥಿಗಳು ಗುಂಪು-ಗುಂಪಾಗಿ ಹೊರಹೋಗಲು ಬಿಡಬಾರದು. ವಿದ್ಯಾರ್ಥಿಗಳು ಒಬ್ಬೊಬ್ಬರಾಗಿ ದೈಹಿಕ ಅಂತರವನ್ನು ಕಾಯ್ದುಕೊಂಡು ಹೊರ ಹೋಗುವಂತೆ ಕ್ರಮವಹಿಸುವುದು.

**II. ಮಕ್ಕಳಿಗೆ ಸಾರಿಗೆ ಸೌಲಭ್ಯ :**

ಜಿಲ್ಲಾ ಉಪನಿರ್ದೇಶಕರು ಜಿಲ್ಲೆಯ ಜಿಲ್ಲಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುತ್ತಿರುವ ತಮ್ಮ ಜಿಲ್ಲೆಯ ಎಲ್ಲಾ ಮಕ್ಕಳಿಗೆ ಸುಗಮ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವುದು:

1. ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಪ್ರತೀ ಜಿಲ್ಲೆಯಲ್ಲಿ ಸಹಾಯವಾಣಿಯನ್ನು ಸ್ಥಾಪಿಸಿ, ವ್ಯಾಪಕ ಪ್ರಚಾರ ನೀಡಿ, ಸೂಕ್ತ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲು ವಿದ್ಯಾರ್ಥಿಗಳು/ಪೋಷಕರಿಂದ ಮನವಿಯನ್ನು ಸ್ವೀಕರಿಸುವುದು.
2. ಪ್ರತೀ ಶಾಲೆಯ ಮುಖ್ಯೋಪಾಧ್ಯಾಯರು ಸ್ವಯಂ ಪ್ರೇರಿತವಾಗಿ ತಮ್ಮ ಶಾಲೆಯಿಂದ ಪರೀಕ್ಷೆಗೆ ಹಾಜರಾಗುತ್ತಿರುವ ಎಲ್ಲಾ ವಿದ್ಯಾರ್ಥಿಗಳನ್ನು ದೂರವಾಣಿ ಮೂಲಕ ಸಂಪರ್ಕಿಸಿ ಸಾರಿಗೆ ವ್ಯವಸ್ಥೆಯ ಬೇಡಿಕೆಗಳನ್ನು ಕ್ರೋಢೀಕರಿಸಿ ದಿನಾಂಕ: 08-06-2020ರೊಳಗೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಲುಪಿಸುವುದು.
3. ಪ್ರತಿ ವಿದ್ಯಾರ್ಥಿಯು ಮುಖಗವಸು (ಫೇಸ್ ಮಾಸ್ಕ್) ಧರಿಸಿರಬೇಕು. ಪ್ರತಿ ಬಸ್ಸಿನಲ್ಲಿ ದೈಹಿಕ ಅಂತರ ಕನಿಷ್ಠ ಒಂದು ಮೀಟರ್ ಕಾಯ್ದುಕೊಳ್ಳುವುದು ಹಾಗೂ ನಿಂತು ಪ್ರಯಾಣಿಸಲು ಅವಕಾಶವಿಲ್ಲ.
4. ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಶಾಲೆಗಳಿಂದ ಸ್ವೀಕರಿಸಿದ ಎಲ್ಲಾ ಬೇಡಿಕೆಗಳ ಆಧಾರದ ಮೇಲೆ ಮಾರ್ಗ ನಕ್ಷೆಗಳನ್ನು ಹಾಗೂ ಪ್ರತೀ ಮಾರ್ಗದಲ್ಲಿ ಬೇಕಾಗುವ ಒಟ್ಟು ಟ್ರಿಪ್‌ಗಳನ್ನು ನಿರ್ಧರಿಸಿ ಪ್ರಸ್ತಾವನೆಯನ್ನು ದಿನಾಂಕ: 10-06-2020ರೊಳಗೆ ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರಿಗೆ ಸಲ್ಲಿಸುವುದು.
5. ಜಿಲ್ಲಾ ಉಪನಿರ್ದೇಶಕರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಬೇಡಿಕೆಗಳನ್ನು ಕ್ರೋಢೀಕರಿಸುವುದು. ಸದರಿ ಬೇಡಿಕೆಗಳ ಮೇಲೆ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳುವುದು.
   - ಸರ್ಕಾರಿ ಸ್ವಾಮ್ಯದ ಬಸ್ಸುಗಳು ಈಗಾಗಲೇ ಸದರಿ ಮಾರ್ಗದಲ್ಲಿ ಸಂಚರಿಸುತ್ತಿದ್ದಲ್ಲಿ, ಸದರಿ ಬಸ್ಸುಗಳು ಪರೀಕ್ಷೆಗೆ ಅನುಕೂಲಕರ ಸಮಯ ಹಾಗೂ ಬೇಕಾಗುವ ಒಟ್ಟು ಟ್ರಿಪ್‌ಗಳನ್ನು ಏರ್ಪಡಿಸಲು ಜಿಲ್ಲಾಧಿಕಾರಿಗಳ ಮೂಲಕ ಸಂಬಂಧಪಟ್ಟ ಡಿಪೋ ಮ್ಯಾನೇಜರ್‌ಗಳಿಗೆ ಸೂಚನೆ ನೀಡುವುದು.
   - ಯಾವುದೇ ಕೋರಿಕೆಯ ಮಾರ್ಗದಲ್ಲಿ ಸರ್ಕಾರಿ ಸ್ವಾಮ್ಯದ ಬಸ್ಸುಗಳು ಲಭ್ಯವಿಲ್ಲದಿದ್ದಲ್ಲಿ, ಖಾಸಗಿ/ಅನುದಾನಿತ ಶಾಲೆಯ ಹೆಚ್ಚುವರಿ ಬಸ್ಸುಗಳನ್ನು ಜಿಲ್ಲಾಧಿಕಾರಿಗಳ ಆದೇಶ ಪಡೆದು ಸೂಕ್ತ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸುವುದು.
   - ಒಂದು ವೇಳೆ ಖಾಸಗಿ/ಅನುದಾನಿತ ಶಾಲಾ ಬಸ್ಸುಗಳು ಬೇಡಿಕೆಗೆ ಅನುಗುಣವಾಗಿ ಲಭ್ಯವಿಲ್ಲದಿದ್ದಲ್ಲಿ, ಸರ್ಕಾರಿ ಸ್ವಾಮ್ಯದ ಬಸ್ಸುಗಳನ್ನು ಒಪ್ಪಂದದ ಮೇರೆಗೆ ಓಡಿಸಲು ಸಂಬಂಧಪಟ್ಟ ಡಿಪೋ ಮ್ಯಾನೇಜರ್‌ರೊಂದಿಗೆ ಚರ್ಚಿಸಿ ಜಿಲ್ಲಾಧಿಕಾರಿಗಳ ಅನುಮೋದನೆಯೊಂದಿಗೆ ಸೂಕ್ತ ಪ್ರಸ್ತಾವನೆಯನ್ನು ದಿನಾಂಕ: 15-06-2020ರೊಳಗೆ ಮಂಡಳಿಗೆ ತಲುಪಿಸುವುದು.

6. ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಬರೆಯುತ್ತಿರುವ ಎಲ್ಲಾ ವಿದ್ಯಾರ್ಥಿಗಳೂ, ಪ್ರವೇಶ ಪತ್ರವನ್ನು ತೋರಿಸಿ ಯಾವುದೇ ಸಾರ್ವಜನಿಕ ಸಾರಿಗೆ ವ್ಯವಸ್ಥೆಯಲ್ಲಿ/ಜಿಲ್ಲಾಡಳಿತದಿಂದ ಆಯೋಜಿಸಿರುವ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸುವುದು.
7. ಪ್ರಸ್ತುತ ಪರೀಕ್ಷೆಗಳು ಮುಂಗಾರು ಮಳೆಗಾಲ ಅವಧಿಯಲ್ಲಿ ನಡೆಯುತ್ತಿರುವುದರಿಂದ ಅತ್ಯಂತ ಕುಗ್ರಾಮ ಹಾಗೂ ದೂರದ ಪ್ರದೇಶಗಳಿಂದ ಮಕ್ಕಳು ಪರೀಕ್ಷಾ ಕೇಂದ್ರಕ್ಕೆ ಹಾಜರಾಗುತ್ತಿದ್ದು, ಸದರಿ ಸ್ಥಳಗಳಿಗೆ ಬಸ್ಸುಗಳಿಂದ ಸಾರಿಗೆ ವ್ಯವಸ್ಥೆ ಕಲ್ಪಿಸಲು ಸಾಧ್ಯವಿಲ್ಲದಿದ್ದಲ್ಲಿ ಸರ್ಕಾರದ ಯಾವುದೇ ಇಲಾಖೆಯ ಜೀಪ್ / ಇತರೆ ವಾಹನ Four wheel drive ವಾಹನಗಳನ್ನು ಬಳಸಿ ಸಾರಿಗೆ ಸಂಪರ್ಕವನ್ನು ಕಲ್ಪಿಸುವುದು. ಒಟ್ಟಾರೆಯಾಗಿ ಯಾವುದೇ ಒಂದು ವಿದ್ಯಾರ್ಥಿಯೂ ಸಹ ಸಾರಿಗೆ ವ್ಯವಸ್ಥೆಯ ಕೊರತೆಯಿಂದಾಗಿ ಪರೀಕ್ಷೆ ಬರೆಯಲು ವಂಚಿತರಾಗದಂತೆ ನೋಡಿಕೊಳ್ಳುವುದು.
8. ಮುಂದುವರೆದು, ಮಕ್ಕಳನ್ನು ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಗೆ ಕರೆದೊಯ್ಯುವಾಗ, ಬಸ್ಸುಗಳನ್ನು ಸ್ಯಾನಿಟೈಸ್ ಮಾಡಲು ಮತ್ತು ಬಸ್ಸಿನೊಳಗೆ ದೈಹಿಕ ಅಂತರವನ್ನು ಕಾಯ್ದುಕೊಳ್ಳಲು ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವುದು.

## III. ಪರೀಕ್ಷೆಯ ಸಂಪೂರ್ಣ ಪ್ರಕ್ರಿಯೆಯಲ್ಲಿ ದೈಹಿಕ ಅಂತರವನ್ನು ಕಾಯ್ದುಕೊಳ್ಳುವುದು:

**1. ಪರೀಕ್ಷಾ ಕೇಂದ್ರವನ್ನು ಪ್ರವೇಶಿಸುವಾಗ :**

- ಪರೀಕ್ಷಾ ಕೇಂದ್ರದ ಪ್ರವೇಶ ದ್ವಾರದಲ್ಲಿ ಚೌಕಗಳನ್ನು ಬರೆಯಬೇಕು ಮತ್ತು ವಿದ್ಯಾರ್ಥಿಗಳು ಅವುಗಳ ಮೂಲಕವೇ **"ಆರೋಗ್ಯ ತಪಾಸಣಾ ಕೌಂಟರ್"** ಕಡೆಗೆ ತೆರಳಬೇಕು. ಈ ಚೌಕಗಳ ನಡುವೆ ಕನಿಷ್ಠ ಮೂರು ಅಡಿ ಅಂತರವಿರಬೇಕು.
- ಪರೀಕ್ಷಾ ಕೇಂದ್ರದ ಪ್ರವೇಶ ದ್ವಾರದಲ್ಲಿ ವಿದ್ಯಾರ್ಥಿಗಳ ದಟ್ಟಣೆ ಇರಬಾರದು.
- ಪರೀಕ್ಷಾ ಕೇಂದ್ರದ ಒಳಗಡೆ ವಿದ್ಯಾರ್ಥಿ ಹಾಗೂ ಪರೀಕ್ಷಾ ಕೇಂದ್ರದ ಸಿಬ್ಬಂದಿಗಳನ್ನು ಹೊರತುಪಡಿಸಿ, ಪೋಷಕರಾಗಲಿ ಅಥವಾ ಯಾವುದೇ ಇತರ ವ್ಯಕ್ತಿಗಳ ಪ್ರವೇಶ ಕಡ್ಡಾಯವಾಗಿ ನಿರ್ಬಂಧಿಸುವುದು.

**2. ಪರೀಕ್ಷಾ ಕೊಠಡಿಯಲ್ಲಿ ಕುಳಿತಿರುವಾಗ :**

- ಪ್ರತಿ ಡೆಸ್ಕ್‌ಗೆ ಗರಿಷ್ಠ ಇಬ್ಬರು ವಿದ್ಯಾರ್ಥಿಗಳು ಮಾತ್ರ ಇರಬೇಕು.
- ಎರಡು ಡೆಸ್ಕ್‌ಗಳ ನಡುವೆ ಕನಿಷ್ಠ ಒಂದು ಮೀಟರ್ ಅಂತರವಿರಬೇಕು. ಅದನ್ನು ಸೂಚಿಸುವ ಚಿತ್ರವನ್ನು ಅನುಬಂಧ–1ರಲ್ಲಿ ಲಗತ್ತಿಸಿದೆ.

3. **ವಿಶೇಷ ಕೊಠಡಿಗಳು :**

- ಪ್ರತಿ ಡೆಸ್ಕ್‌ಗೆ ಗರಿಷ್ಠ ಒಬ್ಬ ವಿದ್ಯಾರ್ಥಿ ಮಾತ್ರ ಇರಬೇಕು.
- ಎರಡು ಡೆಸ್ಕ್‌ಗಳ ನಡುವೆ ಕನಿಷ್ಠ ಆರು ಅಡಿ ಅಂತರವಿರಬೇಕು. ಅದನ್ನು ಸೂಚಿಸುವ ಚಿತ್ರವನ್ನು ಅನುಬಂಧ–2ರಲ್ಲಿ ಲಗತ್ತಿಸಿದೆ.

## IV. ಆರೋಗ್ಯ ತಪಾಸಣಾ ಕೌಂಟರ್ :

- ಪ್ರತಿ ಪರೀಕ್ಷಾ ಕೇಂದ್ರದಲ್ಲಿ 200 ಮಕ್ಕಳಿಗೆ ಒಂದರಂತೆ **"ಆರೋಗ್ಯ ತಪಾಸಣಾ ಕೌಂಟರ್"**ನ್ನು ಪರೀಕ್ಷಾ ಕೇಂದ್ರದ ಮುಖ್ಯ ದ್ವಾರದಲ್ಲಿ ಸ್ಥಾಪಿಸುವುದು.
- ಪ್ರತಿ ಪರೀಕ್ಷಾ ಕೇಂದ್ರಕ್ಕೆ ಆರೋಗ್ಯ ಇಲಾಖೆಯಿಂದ ಇಬ್ಬರು ಅರೆ ವೈದ್ಯಕೀಯ/ಆಶಾ ಕಾರ್ಯಕರ್ತೆಯರು/ಇತರೆ ಸಿಬ್ಬಂದಿಯನ್ನು ಪಡೆಯುವುದು. ಸದರಿ ಸಿಬ್ಬಂದಿಯು ಪರೀಕ್ಷಾ ಕೇಂದ್ರಕ್ಕೆ **"ಥರ್ಮಲ್ ಸ್ಕ್ಯಾನರ್"** ಹಾಗೂ **"ಪ್ರಥಮ ಚಿಕಿತ್ಸಾ ಪೆಟ್ಟಿಗೆ"**ಯೊಂದಿಗೆ ಹಾಜರಿರಲು ಜಿಲ್ಲಾಧಿಕಾರಿಗಳ

ಮೂಲಕ ಸೂಚಿಸುವುದು. ಪ್ರತೀ ಆರೋಗ್ಯ ತಪಾಸಣಾ ಕೌಂಟರ್‌ಗೆ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯಿಂದ ಇಬ್ಬರು ಸ್ವಯಂ ಸೇವಕರನ್ನು ನಿಯೋಜಿಸುವುದು.

- **"ಆರೋಗ್ಯ ತಪಾಸಣಾ ಕೌಂಟರ್"** ಪರೀಕ್ಷೆ ನಡೆಯುವ ಎಲ್ಲಾ ದಿನಗಳಂದು ಬೆಳಿಗ್ಗೆ 8.30ರಿಂದ ಪರೀಕ್ಷೆ ನಡೆಯುವ ಅವಧಿಯವರೆಗೂ ಕಾರ್ಯನಿರ್ವಹಿಸಬೇಕು.
- ಪರೀಕ್ಷಾ ಕಾರ್ಯದಲ್ಲಿ ತೊಡಗಿರುವ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಕಡ್ಡಾಯವಾಗಿ **"ಆರೋಗ್ಯ ತಪಾಸಣಾ ಕೌಂಟರ್"** ಮೂಲಕ ತಪಾಸಣೆಗೆ ಒಳಪಡಿಸಿ ಪರೀಕ್ಷಾ ಕೇಂದ್ರದೊಳಗೆ ಹೋಗಲು ಅನುಮತಿಸಬೇಕು.
- ಪರೀಕ್ಷಾ ಕೇಂದ್ರಕ್ಕೆ ಆರೋಗ್ಯ ಇಲಾಖೆಯಿಂದ ನಿಯೋಜಿಸಿರುವ ಅರೆ ವೈದ್ಯಕೀಯ ಸಿಬ್ಬಂದಿಯು ಎಲ್ಲಾ ವಿದ್ಯಾರ್ಥಿಗಳನ್ನು ತಪಾಸಣೆಗೆ ಒಳಪಡಿಸುವುದು.
- ಒಂದು ವೇಳೆ ಯಾವುದಾದರೂ ವಿದ್ಯಾರ್ಥಿಯು ಕೆಮ್ಮು/ನೆಗಡಿ/ಜ್ವರ ಮೊದಲಾದವುಗಳಿಂದ ಬಳಲುತ್ತಿದ್ದಲ್ಲಿ, **"ವಿಶೇಷ ಕೊಠಡಿ"**ಯಲ್ಲಿ ಕೂರಿಸಿ ಪರೀಕ್ಷೆ ನಡೆಸಬೇಕು.
- ಒಂದು ವೇಳೆ ವಿದ್ಯಾರ್ಥಿ **"ಕೋವಿಡ್ ಪಾಸಿಟಿವ್"** ಎಂದು ಈಗಾಗಲೇ ಗುರುತಿಸಲ್ಪಟ್ಟಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಯಲ್ಲಿ ಬರೆಯಲು ಅವಕಾಶ ನೀಡಿ ಅದನ್ನು **"ಪ್ರಥಮ ಅವಕಾಶ"** ವೆಂದು ಪರಿಗಣಿಸಲಾಗುವುದು.
- ಪರೀಕ್ಷಾ ಕೇಂದ್ರದೊಳಗೆ ಹೋಗುವ ಮುನ್ನ ಪ್ರತಿ ಮಗುವೂ ಮಾಸ್ಕ್‌ಗಳನ್ನು ಧರಿಸಿರುವ ಬಗ್ಗೆ ಖಾತರಿ ಪಡಿಸಿಕೊಳ್ಳುವುದು. ಒಂದು ವೇಳೆ ಧರಿಸಿರದಿದ್ದರೆ **"ಆರೋಗ್ಯ ತಪಾಸಣಾ ಕೌಂಟರ್"**ನಲ್ಲಿ ಮಾಸ್ಕ್‌ಗಳನ್ನು ನೀಡುವುದು.
- ಪ್ರತಿ ಮಗುವೂ ತನ್ನ ಕೈಗಳನ್ನು ಸ್ಯಾನಿಟೈಸ್ ಮಾಡಿಕೊಳ್ಳುವಂತೆ ನೋಡಿಕೊಳ್ಳುವುದು.
- ಪರೀಕ್ಷಾ ಕೇಂದ್ರದೊಳಗೆ ಪ್ರವೇಶಿಸುವ ಪ್ರತಿಯೊಬ್ಬ ಅಧಿಕೃತ ವ್ಯಕ್ತಿಯನ್ನು ಆರೋಗ್ಯ ತಪಾಸಣೆಗೆ ಒಳಪಡಿಸಿ, ಕೈಗಳನ್ನು ಸ್ಯಾನಿಟೈಸ್ ಮಾಡಿ, ಮತ್ತು ಮಾಸ್ಕ್‌ಗಳನ್ನು ಧರಿಸಿರುವ ಬಗ್ಗೆ ಖಾತರಿ ಪಡಿಸಿಕೊಂಡ ನಂತರವೇ ಪ್ರವೇಶಕ್ಕೆ ಅನುಮತಿಸುವುದು.
- ಆರೋಗ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಪ್ರತಿ ತಾಲ್ಲೋಕಿಗೊಂದು "ತುರ್ತು ಚಿಕಿತ್ಸಾ ವಾಹನ"ವನ್ನು ಎಸ್.ಎಸ್.ಎಲ್.ಸಿ ಪರೀಕ್ಷಾ ಮಕ್ಕಳಿಗಾಗಿ ಮೀಸಲಿಡುವುದು.
- ರೋಗಲಕ್ಷಣಗಳಿರುವ ಮಕ್ಕಳಿಗೆ ಪರೀಕ್ಷೆ ಮುಗಿದ ನಂತರ ವೈದ್ಯಕೀಯ ತಪಾಸಣೆಗೆ ಮತ್ತು ಚಿಕಿತ್ಸೆಗೆ ಕಳುಹಿಸುವುದು.

**V. ಪರೀಕ್ಷಾ ಕೇಂದ್ರದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಪ್ರಮಾಣಿತ ಕಾರ್ಯಾಚರಣಾ ವಿಧಾನ (ಎಸ್.ಓ.ಪಿ)**

- ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಯಾವುದೇ ಸಿಬ್ಬಂದಿಗೆ ರೋಗ ಲಕ್ಷಣಗಳಿಲ್ಲ ಎಂದು ಖಚಿತಪಡಿಸಿಕೊಳ್ಳಬೇಕು.
- ಮುಖ್ಯ ಅಧೀಕ್ಷಕರು ಪರೀಕ್ಷೆಯ ಸಂಪೂರ್ಣ ಪ್ರಕ್ರಿಯೆಯಲ್ಲಿ ಎಲ್ಲಾ ಸಿಬ್ಬಂದಿಗಳು ದೈಹಿಕ ಅಂತರವನ್ನು ಕಾಯ್ದುಕೊಳ್ಳುವಂತೆ ನೋಡಿಕೊಳ್ಳಬೇಕು.
- ಪರೀಕ್ಷಾ ಕಾರ್ಯಕ್ಕಾಗಿ ನಿಯೋಜಿಸಲಾದ ಎಲ್ಲಾ ಸಿಬ್ಬಂದಿಗಳು ಪರೀಕ್ಷೆಯ ಸಂಪೂರ್ಣ ಪ್ರಕ್ರಿಯೆಯಲ್ಲಿ ನಿಯಮಿತವಾಗಿ, ವಿಶೇಷವಾಗಿ ಪ್ರಶ್ನೆಪತ್ರಿಕೆಗಳನ್ನು ಮತ್ತು ಉತ್ತರ ಪತ್ರಿಕೆಗಳನ್ನು ಬಳಸುವಾಗ ತಮ್ಮ ಕೈಗಳನ್ನು ಸ್ಯಾನಿಟೈಸ್‌ಗೊಳಿಸಬೇಕು.
- ಶೌಚಾಲಯಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಕೈ ತೊಳೆಯಲು ನೀರು ಮತ್ತು ಸಾಬೂನು ಹಾಗೂ ಲಿಕ್ವಿಡ್ ಸೋಪ್ ಲಭ್ಯವಾಗುವಂತೆ ಮುಖ್ಯ ಅಧೀಕ್ಷಕರು ನೋಡಿಕೊಳ್ಳುವುದು.

- ಪರೀಕ್ಷಾ ಕೇಂದ್ರದ ಯಾವುದೇ ಅಧಿಕಾರಿಗಳು/ಸಿಬ್ಬಂದಿ ಯಾವುದೇ ಮಕ್ಕಳೊಂದಿಗೆ ನಿಕಟ ಸಂಪರ್ಕಕ್ಕೆ ಬರಬಾರದು.
- ಕೊಠಡಿ ಮೇಲ್ವಿಚಾರಕರು ತಮ್ಮ ಮೇಜಿನ ಮೇಲೆ ಸ್ಯಾನಿಟೈಸರ್ ಹೊಂದಿರಬೇಕು ಹಾಗೂ ಪ್ರಶ್ನೆಪತ್ರಿಕೆಗಳನ್ನು ಮತ್ತು ಉತ್ತರ ಪತ್ರಿಕೆಗಳನ್ನು ತೆರೆಯುವ ಮತ್ತು ವಿತರಿಸುವ ಮೊದಲು ಅದನ್ನು ಬಳಸಬೇಕು. ಅಲ್ಲದೇ ಪರೀಕ್ಷೆಯ ಸಂಪೂರ್ಣ ಪ್ರಕ್ರಿಯೆಯಲ್ಲಿ ಅರ್ಧ ಗಂಟೆಗೊಮ್ಮೆ ಅಥವಾ ಯಾವುದೇ ವಸ್ತುಗಳ ಮೇಲ್ಮೈಯನ್ನು ಸ್ಪರ್ಶಿಸಿದಾಗ ಕೈಗಳನ್ನು ಪದೇ ಪದೇ ಸ್ಯಾನಿಟೈಸ್‌ಗೊಳಿಸಿಕೊಳ್ಳಬೇಕು.

## VI. ಹಾಸ್ಟಲ್‌ಗಳ/ವಲಸೆ ಕುಟುಂಬದ ಮಕ್ಕಳಿಗಾಗಿ ಮಾಡಲಾಗಿರುವ ಅವಕಾಶಗಳು :

- ಹಾಸ್ಟಲ್‌ಗಳ/ವಸತಿ ಶಾಲೆಗಳ/ವಲಸೆ ಕುಟುಂಬದ ಮಕ್ಕಳು ತಮ್ಮ ಪ್ರಸ್ತುತ ನಿವಾಸಕ್ಕೆ ಸಮೀಪವಿರುವ ಪರ್ಯಾಯ ಪರೀಕ್ಷಾ ಕೇಂದ್ರವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ. ಇದಕ್ಕಾಗಿ ವಿದ್ಯಾರ್ಥಿಗಳು ಅವರ ಶಾಲಾ ಮುಖ್ಯ ಶಿಕ್ಷಕರನ್ನು ಸಂಪರ್ಕಿಸುವುದು.
- ಎಲ್ಲಾ ಶಾಲೆಯ ಮುಖ್ಯ ಶಿಕ್ಷಕರು ಮಕ್ಕಳ/ಪೋಷಕರನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ ಪರ್ಯಾಯ ಪರೀಕ್ಷಾ ಕೇಂದ್ರಗಳ ಅವಕಾಶಗಳ ಬಗ್ಗೆ ತಿಳಿಸುವುದು ಹಾಗೂ ಬದಲಾವಣೆ ಬಯಸಿದಲ್ಲಿ ಸೂಕ್ತ ಕ್ರಮಕೈಗೊಳ್ಳುವುದು.

## VII. ಹೊರ ರಾಜ್ಯ/ಗಡಿರಾಜ್ಯದ ಹೊರಗಿನಿಂದ ವಲಸೆ ಬಂದ ಮಕ್ಕಳು :

- ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಯಾವುದೇ ಮಕ್ಕಳು ರಾಜ್ಯದ ಹೊರಗೆ ವಲಸೆ ಹೋಗಿದ್ದರೆ/ಪ್ರಯಾಣಿಸಿದ್ದರೆ ಅಥವಾ ಗಡಿ ರಾಜ್ಯದಲ್ಲಿ ಉಳಿದುಕೊಂಡಿದ್ದರೆ ಜೂನ್ 25 ರಿಂದ ಜುಲೈ 4 ರವರೆಗೆ ನಡೆಯುವ ಮುಖ್ಯ ಪರೀಕ್ಷೆಗೆ ಹಾಜರಾಗಲು ಅವಕಾಶ ನೀಡಲಾಗುತ್ತದೆ. ಯಾವುದೇ ಕಾರಣದಿಂದ ಅವರು ಹಾಜರಾಗಲು ಸಾಧ್ಯವಾಗದಿದ್ದರೆ, ಆ ಮಕ್ಕಳಿಗೆ ಪೂರಕ ಪರೀಕ್ಷೆಗೆ ಹಾಜರಾಗಲು ಆಯ್ಕೆಯನ್ನು ನೀಡಲಾಗುತ್ತದೆ. ಮತ್ತು ಈ ಮಕ್ಕಳಿಗೆ ಪೂರಕ ಪರೀಕ್ಷೆಯನ್ನು ಮೊದಲ/ಹೊಸ ಪ್ರಯತ್ನವೆಂದು ಪರಿಗಣಿಸಲಾಗುತ್ತದೆ.
- ರಾಜ್ಯದ ಗಡಿ ಜಿಲ್ಲೆಗಳ ಉಪನಿರ್ದೇಶಕರುಗಳು ಹೊರ ರಾಜ್ಯದಿಂದ ಪರೀಕ್ಷೆ ಬರೆಯಲು ಹಾಜರಾಗುತ್ತಿರುವ ವಿದ್ಯಾರ್ಥಿಗಳಿಗೆ ಅವಶ್ಯವಿರುವ ವಸತಿ ವ್ಯವಸ್ಥೆ/ಸಾರಿಗೆ ವ್ಯವಸ್ಥೆ/ಪ್ರತೀ ದಿವಸ ಗಡಿಯನ್ನು ದಾಟಲು ಬೇಕಿರುವ ಸೂಕ್ತ ಅನುಮತಿ ಪತ್ರವನ್ನು ದೊರಕುವಂತೆ ಎಲ್ಲಾ ಕ್ರಮಗಳನ್ನು ಕೈಗೊಳ್ಳುವುದು.
- ಇನ್ಸ್ಟಿಟ್ಯೂಷನಲ್ (Institutional) ಕ್ವಾರಂಟೈನ್‌ನಲ್ಲಿರುವ ಮಕ್ಕಳಿಗೆ ಪೂರಕ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದು ಹಾಗೂ ಇದನ್ನು **"ಪ್ರಥಮ ಅವಕಾಶ"** ಎಂದು ಪರಿಗಣಿಸಲಾಗುವುದು.
- ಮಹಾರಾಷ್ಟ್ರ ರಾಜ್ಯದ ವಿದ್ಯಾರ್ಥಿಗಳಿಗೆ, ಸಂಬಂಧಪಟ್ಟ ಪರೀಕ್ಷಾ ಕೇಂದ್ರಗಳಲ್ಲಿ ಪ್ರತ್ಯೇಕ ಕೊಠಡಿಯಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸುವುದು.

## VIII. ಕಂಟೈನ್‌ಮೆಂಟ್ ವಲಯಗಳಲ್ಲಿನ ಮಕ್ಕಳು :

ಈ ಕೆಳಗಿನ ಷರತ್ತುಗಳಿಗೆ ಒಳಪಟ್ಟು ಕಂಟೈನ್‌ಮೆಂಟ್ ವಲಯದಲ್ಲಿರುವ ಮಕ್ಕಳಿಗೆ ಮುಖ್ಯ ಪರೀಕ್ಷೆಗೆ ಹಾಜರಾಗಲು ಅವಕಾಶ ನೀಡಲಾಗಿದೆ.

- ಸಾಮಾನ್ಯ ಪರೀಕ್ಷಾ ಕೇಂದ್ರಗಳಲ್ಲಿ ಕಂಟೈನ್‌ಮೆಂಟ್ ವಲಯದಿಂದ ಬಂದಿರುವ ವಿದ್ಯಾರ್ಥಿಗಳು **"ವಿಶೇಷ ಕೊಠಡಿ"**ಗಳಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸುವುದು.

- ಸಂಬಂಧ ಪಟ್ಟ ಶಾಲೆಯ ಮುಖ್ಯ ಶಿಕ್ಷಕರು ಕಂಟೈನ್‌ಮೆಂಟ್ ವಲಯದಲ್ಲಿರುವ ತಮ್ಮ ವಿದ್ಯಾರ್ಥಿಗಳ ಪಟ್ಟಿಯನ್ನು ತಯಾರಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ "Incident Commander" ರವರಿಗೆ ಸಲ್ಲಿಸಿ ಸದರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅನುಮತಿಯನ್ನು ಪಡೆಯುವುದು ಹಾಗೂ ಪ್ರವೇಶ ಪತ್ರದ ಮೇಲೆ ಕಂಟೈನ್‌ಮೆಂಟ್ ವಲಯದಲ್ಲಿರುವ ಮುದ್ರೆಯನ್ನು ಒತ್ತುವುದು.
- ಇಂತಹ ವಿದ್ಯಾರ್ಥಿಗಳಗೆ N95 ಮಾಸ್ಕ್‌ಗಳನ್ನು ಆರೋಗ್ಯ ಇಲಾಖೆಯಿಂದ ಪಡೆದು ನೀಡುವುದು.
- ಯಾವುದೇ ಕಾರಣದಿಂದ ಇಂತಹ ವಿದ್ಯಾರ್ಥಿಗಳು ಹಾಜರಾಗಲು ಸಾಧ್ಯವಾಗದಿದ್ದರೆ, ಆ ಮಕ್ಕಳಿಗೆ ಪೂರಕ ಪರೀಕ್ಷೆಗೆ ಹಾಜರಾಗಲು ಆಯ್ಕೆಯನ್ನು ನೀಡಲಾಗುವುದು ಮತ್ತು ಈ ಮಕ್ಕಳಿಗೆ ಪೂರಕ ಪರೀಕ್ಷೆಯನ್ನು ಮೊದಲ/ಹೊಸ ಪ್ರಯತ್ನವೆಂದು ಪರಿಗಣಿಸಲಾಗುವುದು.
- ಎಲ್ಲಾ ವಿಶೇಷ ಕೊಠಡಿಗಳನ್ನು ಆ ದಿನದ ಪರೀಕ್ಷೆ ಮುಗಿದ ನಂತರ ಸಾಯಂಕಾಲ ಸೋಂಕು ನಿವಾರಕ ದ್ರಾವಕಗಳಿಂದ ಸ್ವಚ್ಛಗೊಳಿಸುವುದು [ಕೆಮಿಕಲ್ ಡಿಸ್-ಇನ್‌ಫೆಕ್ಷನ್ (Chemical Disinfection) ಮಾಡುವುದು.]

**IX. ವಿಶೇಷ ಸೂಚನೆ :**

ಎಸ್ ಎಸ್ ಎಲ್ ಸಿ ಪರೀಕ್ಷಾ ಪ್ರಕ್ರಿಯೆಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಯ ಜಿಲ್ಲಾ, ತಾಲ್ಲೂಕು ಮತ್ತು ಪರೀಕ್ಷಾ ಕೇಂದ್ರದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ/ಸಿಬ್ಬಂದಿಗಳಿಗೆ ಆಯಾ ಜಿಲ್ಲೆಯ ಉಪನಿರ್ದೇಶಕರು/ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲ್ಕಂಡ ಎಸ್ ಓ ಪಿ ಯಲ್ಲಿ ವಿವರಿಸಿರುವ ಅಂಶಗಳ ಬಗ್ಗೆ ವಿವರವಾದ ತರಬೇತಿಯನ್ನು ಪರೀಕ್ಷಾ ಪೂರ್ವದಲ್ಲಿ ತಪ್ಪದೇ ನೀಡುವುದು ಹಾಗೂ ಪ್ರತಿ ಪರೀಕ್ಷಾ ಕೇಂದ್ರದಲ್ಲಿಯೂ ಸಹ ಎಸ್ ಓ ಪಿ ಯನ್ನು ಅನುಷ್ಠಾನಗೊಳಿಸಲು ಮಾಡಿಕೊಂಡಿರುವ ಸಿದ್ಧತೆಗಳನ್ನು ಪರೀಕ್ಷಾ ಪೂರ್ವದಲ್ಲಿ ಪರಿಶೀಲಿಸಿ ಅನುಮೋದಿಸುವುದು. ಈ ಬಗ್ಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಮೇಲುಸ್ತುವಾರಿಯನ್ನು ವಹಿಸುವುದು.

4/6/20

**ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ**
**ಮತ್ತು ಅಧ್ಯಕ್ಷರು ಕ.ಪ್ರೌ.ಶಿ.ಪ.ಮ.**

**ಗೆ,**

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ, ಪೋಲೀಸ್ ವರಿಷ್ಠಾಧಿಕಾರಿಗಳಿಗೆ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್ ರವರಿಗೆ ಅಗತ್ಯ ಕ್ರಮಕ್ಕಾಗಿ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಹಾಗೂ ಕಲಬುರಗಿ ವಿಭಾಗ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಹಾಗೂ ಸಾರಿಗೆ ಅಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ),/ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಮುಂದಿನ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಮೂಲಕ ಮುಂದಿನ ಅಗತ್ಯ ಕ್ರಮಕ್ಕಾಗಿ

**ಪ್ರತಿಯನ್ನು ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ:**

1) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಸದರಿ ಮಾಹಿತಿಯನ್ನು ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾ. ಮತ್ತು ಪ್ರೌ. ಶಿಕ್ಷಣ)ರವರಿಗೆ ಮಾಹಿತಿಗಾಗಿ.